## ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಇವರು ಮಂಡಿಸಿರುವ ನಿಯಮ-330ಕ್ಕೆ ಉತ್ತರ

**ವಿಷಯ:-**

**ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ 10-15 ವರ್ಷಗಳಿಂದ ಅತಿಥಿ ಶಿಕ್ಷಕರು/ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುತ್ತಿಲ್ಲ. ಯಾವುದೇ ರಜೆ ಸೌಲಭ್ಯಗಳಿಲ್ಲ, ಸೇವಾ ಭದ್ರತೆ ಇರುವುದಿಲ್ಲ. ಇದರಿಂದಾಗಿ ಗ್ರಾಮೀಣ ಪ್ರದೇಶದಲ್ಲಿ ಅತಿಥಿ ಶಿಕ್ಷಕರು/ಉಪನ್ಯಾಸಕರ ಕೊರತೆ ಉಂಟಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಸರ್ಕಾರಿ ಪ್ರಾಥಮಿಕ,ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅಂದರೆ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅಥವಾ ನೇರ ನೇಮಕಾತಿಯಿಂದ/ವರ್ಗಾವಣೆಯಿಂದ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಗೌರವ ಸಂಭಾವನೆ ಪಾತಿಸುವ ಆಧಾರದ ಮೇಲೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್‌ಇಎಸ್ 2022,ದಿನಾಂಕ:18.06.2022ರನ್ವಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಅತಿಥಿ ಶಿಕ್ಷಕರುಗಳಿಗೆ ಮಾಸಿಕ ರೂ. 7,500/- ದಿಂದ ರೂ.10,000/-ಗಳು ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿನ ಅತಿಥಿ ಶಿಕ್ಷಕರುಗಳಿಗೆ ಮಾಸಿಕ ರೂ. 8000/- ರಿಂದ ರೂ.10,500/-ಗಳವರೆಗೆ ಗೌರವ ಸಂಭಾವನೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಪಿ 166 ಎಸ್‌ಇಎಸ್2023 (ಭಾಗ-1) ದಿನಾಂಕ:14.02.2024 ರನ್ವಯ ರಾಜ್ಯದ ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆ-ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ (ಎಲ್.ಕೆ.ಜಿ/ಯು.ಕೆ.ಜಿ) ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆ ರೂ.7,500/- ದಿಂದ ಪರಿಷ್ಕರಿಸಿ 10,000/-ರೂಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ:ಇಪಿ 50 ಡಿಜಿಡಿ 2022, ದಿನಾಂಕ:05.07.2022ರನ್ವಯ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವ ಅತಿಥಿ ಉಪನ್ಯಾಸಕರಿಗೆ ಗೌರವ ಸಂಭಾವನೆ ರೂ.9,000/- ದಿಂದ ಪರಿಷ್ಕರಿಸಿ 12,000/-ರೂಗಳಿಗೆ ಹೆಚ್ಚಿಸಿ ಗೌರವಧನವನ್ನು ಪಾವತಿಸಲಾಗುತ್ತಿದೆ.

ಸರ್ಕಾರಿ ಪ್ರಾಥಮಿಕ,ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಇಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿದ ಕೂಡಲೇ ಅತಿಥಿ ಶಿಕ್ಷಕರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು. ಆದ್ದರಿಂದ ಅತಿಥಿ ಶಿಕ್ಷಕರಿಗೆ/ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

**ಸಂಖ್ಯೆ: ಇಪಿ 135 ಎಸ್‌ಇಎಸ್ 2024**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**